<u>**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಟಿ.ನರಸೀಪುರ**</u>

<u>ದಿನಾಂಕ 24 ನೇ ಡಿಸೆಂಬರ್ 2025</u>

<u>**ಸಿ.ಸಿ. 2825/2025**</u>

ಪಿರ್ಯಾದುದಾರರುಃ ರಾಜ್ಯದ ಪರ ಬನ್ನೂರು ಪೊಲೀಸರು

ವಿರುದ್ಧ

ಆರೋಪಿಃ ಶಿವಸ್ವಾಮಿ.ಬಿ ಬಿನ್ ಲೇಟ್ ಬಸಪ್ಪ, 60 ವರ್ಷ,
ವಾಸಃ ಬನ್ನಿಮಂಟಪ, ಮೈಸೂರು.

<u>**ಆರೋಪಣೆ**</u>

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ಆರೋಪಣೆಯನ್ನು ಮಾಡುತ್ತೇನೆ.**

ದಿನಾಂಕ 14.07.2025 ರಂದು ಮಧ್ಯಾಹ್ನ 2.30 ಗಂಟೆ ಸಮಯದಲ್ಲಿ ಬನ್ನೂರು ಠಾಣಾ ವ್ಯಾಪ್ತಿಯಲ್ಲಿ ಟಿ.ನರಸೀಪುರ ತಾಲ್ಲೂಕು, ಬನ್ನೂರು ಟೌನ್, ಕಾವೇರಿ ಸರ್ಕಲ್ ಸಮೀಪ ಗುರುರಾಘವೇಂದ್ರ ಹೋಟೆಲ್ ಬಳಿ ಪದ್ಮಮ್ಮರವರ ಮನೆ ಮುಂಭಾಗ ಮೈಸೂರು ಮಳವಳ್ಳಿ ಮುಖ್ಯ ರಸ್ತೆಯಲ್ಲಿ ಚಾಸಾ-2 ವೆಂಕಟಮ್ಮರವರು ಪದ್ಮಮ್ಮರವರ ಮನೆಯ ಮುಂಭಾಗದ ರಸ್ತೆಯ ಎಡಭಾಗದಲ್ಲಿ ನಡೆದುಕೊಂಡು ಹೋಗುತ್ತಿದ್ದಾಗ ಆರೋಪಿಯಾದ ನೀವು ನಿಮ್ಮ ಬಜಾಜ್ ಪ್ಲಾಟಿನಾ ಮೋಟಾರು ಸೈಕಲ್ ಸಂಖ್ಯೆ ಕೆಎ-09-ಜೆಜಿ-5087 ನ್ನು ಮೈಸೂರು ಕಡೆಯಿಂದ ಮಳವಳ್ಳಿ ಕಡೆಗೆ ಮಾನವ ಪ್ರಾಣಕ್ಕೆ ಹಾನಿ ಉಂಟು ಮಾಡುವ ರೀತಿಯಲ್ಲಿ ಅತಿ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿ ಅಪಘಾತಕ್ಕೆ ಕಾರಣರಾಗಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ **281** ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ ಎಂದು ಅಪಾದಿಸಲಾಗಿದೆ.

ಎರಡನೆಯದಾಗಿ ಮೇಲೆ ಹೇಳಿರುವ ದಿನಾಂಕ, ಸಮಯ ಮತ್ತು ಸ್ಥಳದಂದು ಆರೋಪಿಯಾದ ನೀವು ಮೋಟಾರು ಸೈಕಲನ್ನು ಅತಿ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿ ರಸ್ತೆಯ ಎಡಭಾಗದಲ್ಲಿ ನಡೆದುಕೊಂಡು ಹೋಗುತ್ತಿದ್ದ ಚಾಸಾ-2

ವೆಂಕಟಮ್ಮರವರಿಗೆ ಹಿಂಬದಿಯಿಂದ ಡಿಕ್ಕಿ ಮಾಡಿದ ಪರಿಣಾಮ ಚಾಸಾ–2 ರವರು ಕೆಳಗೆ ಬಿದ್ದಿದ್ದು ಚಾಸಾ–2 ರವರ ಬಲ ಕುಂಡಿಗೆ ಪೆಟ್ಟಾಗಿ ತೀವ್ರ ಸ್ವರೂಪದ ಗಾಯ ಉಂಟಾಗಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ **125(b)** ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ ಎಂದು ಅಪಾದಿಸಲಾಗಿದೆ.

**(ಮೇಲ್ಕಂಡ ಆರೋಪಗಳ ಬಗ್ಗೆ ಆರೋಪಿಯಾದ ನೀವು ಈ ಮಾನ್ಯ ನ್ಯಾಯಾಲಯದಲ್ಲಿ ವಿಚಾರಣೆಗೊಳಪಡತಕ್ಕದ್ದು ಎಂದು ನಾನು ನಿರ್ದೇಶಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ., ಟಿ.ನರಸೀಪುರ.**

**ಆರೋಪಿಯ ಹೇಳಿಕೆ**

ಪ್ರಶ್ನೆ-1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?
ಉತ್ತರಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ , ಟಿ.ನರಸೀಪುರ.**

**ಆರೋಪಿ ಸಹಿಃ**